**All India Radio: Bangalore**
**Regional Bulletin In Kannada**
**06.05.2026 / 6.40 p.m.**

**ಆಕಾಶವಾಣಿ ಬೆಂಗಳೂರು**

**ಪ್ರದೇಶ ಸಮಾಚಾರ**

**06.05.2026 / 6.40 p.m.**

***************

ಮುಖ್ಯಾಂಶಗಳು

೧. ಪರಿಶಿಷ್ಟ ಸಮುದಾಯಗಳಲ್ಲಿನ ಅಸಮಾನತೆ ನಿವಾರಣೆಗಾಗಿ ಒಳ ಮೀಸಲಾತಿಗೆ ತೀರ್ಮಾನ - ಮುಖ್ಯಮಂತ್ರಿ ಸಿದ್ದರಾಮಯ್ಯ

೨. ರಾಜ್ಯದಲ್ಲಿ ಪೊಲೀಸ್ ಸಿಬ್ಬಂದಿಗೆ ಹಂತ ಹಂತವಾಗಿ ವಸತಿ ಗೃಹ ನಿರ್ಮಾಣ - ಗೃಹ ಸಚಿವ ಡಾ.ಜಿ.ಪರಮೇಶ್ವರ್

೩. ವಿಧಾನಸಭಾ ಸದಸ್ಯರಾಗಿ ಡಿ.ಎನ್.ಜೀವರಾಜ ಪ್ರಮಾಣ ವಚನ ಸ್ವೀಕಾರ

೪. ಐಟಿಎಫ್‌ಡಬ್ಲ್ಯು ತುಮಕೂರು ಓಪನ್ ಟೆನಿಸ್ ಟೂರ್ನಿ ; ಭಾರತೀಯ ಆಟಗಾರ್ತಿಯರ ಮುಂದುವರೆದ ಪ್ರಾಬಲ್ಯ

---

ರಾಜ್ಯದಲ್ಲಿ ಪರಿಶಿಷ್ಟ ಸಮುದಾಯಗಳಲ್ಲಿನ ಅಸಮಾನತೆ ಹೋಗಲಾಡಿಸಲು ಒಳ ಮೀಸಲಾತಿಗೆ ತೀರ್ಮಾನಿಸಲಾಗಿದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಹೇಳಿದ್ದಾರೆ.

ಅವರು ಮೈಸೂರಿನಲ್ಲಿಂದು ಆಯೋಜಿಸಲಾಗಿದ್ದ ಶ್ರೀ ಸಿದ್ದರಾಮಮೇಶ್ವರ ಜಯಂತಿ ಉದ್ಘಾಟಿಸಿ ಮಾತನಾಡಿದರು. ಒಳಮೀಸಲಾತಿಯಂತೆ ಎಡಗೈ ಮತ್ತು ಬಲಗೈಗೆ ತಲಾ ಶೇಕಡ ೫.೨೫ ಹಾಗೂ ಇತರೆ ಉಪಜಾತಿಗಳಿಗೆ ಶೇಕಡ ೪.೫ರಷ್ಟು ಹಂಚಿಕೆ ಮಾಡಲಾಗಿದೆ ಎಂದು ಮುಖ್ಯಮಂತ್ರಿ ವಿವರಿಸಿದರು.

ಸರ್ಕಾರ ಸಾಮಾಜಿಕ ನ್ಯಾಯಕ್ಕೆ ಬದ್ಧವಾಗಿದೆ. ಸಮ ಸಮಾಜ ನಿರ್ಮಿಸುವ ಸಂಕಲ್ಪ ಹೊಂದಿದೆ ಎಂದರು.

ರಾಜಕೀಯ ಸ್ವಾತಂತ್ರ್ಯವು ಆರ್ಥಿಕ ಹಾಗೂ ಸಾಮಾಜಿಕ ಸ್ವಾತಂತ್ರ್ಯದ ತಳಹದಿಯ ಮೇಲೆ ನಿಂತಿದೆ. ಶಿಕ್ಷಣ ಪಡೆದಾಗ ಮಾತ್ರ ಸಾಮಾಜಿಕ ಆರ್ಥಿಕ ಶಕ್ತಿ ದೊರಕಲು ಸಾಧ್ಯ ಎಂದರು.

ಪ್ರಸ್ತುತ ಜಾತಿ ಸಮೀಕ್ಷೆ ನಡೆಯುತ್ತಿದ್ದು, ಸಮೀಕ್ಷೆಯ ವರದಿ ಬಂದ ನಂತರ ಚರ್ಚೆ ನಡೆಸಲಾಗುವುದು. ಯಾರಿಗೂ ಅನ್ಯಾಯವಾಗಬಾರದು, ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಹೇಳಿದರು.

ಇದೇ ಸಂದರ್ಭದಲ್ಲಿ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಚಿವ ಶಿವರಾಜ್ ತಂಗಡಗಿ ಮಾತನಾಡಿ  ಭೋವಿ ಸಮಾಜದವರಿಗೆ ಸರ್ಕಾರದಿಂದ ಸೌಲಭ್ಯಗಳು ತಲುಪುತ್ತಿವೆ ಎಂದರು.

ಕಾರ್ಯಕ್ರಮದಲ್ಲಿ  ಸಚಿವ ಕೆ.ವೆಂಕಟೇಶ್ ಸೇರಿದಂತೆ  ಹಲವು ಗಣ್ಯರು ಉಪಸ್ಥಿತರಿದ್ದರು.

---

ರಾಜ್ಯದಲ್ಲಿ ಪೊಲೀಸ್ ಸಿಬ್ಬಂದಿಗೆ ಹಂತ ಹಂತವಾಗಿ ವಸತಿ ಗೃಹ ಒದಗಿಸಲಾಗುವುದು ಎಂದು ಗೃಹ ಸಚಿವ ಡಾ.ಜಿ.ಪರಮೇಶ್ವರ್ ಹೇಳಿದ್ದಾರೆ.

ಅವರು ಬೆಂಗಳೂರಿನಲ್ಲಿಂದು ಮಾಧ್ಯಮದವರೊಂದಿಗೆ ಮಾತನಾಡಿ, ಪ್ರಸ್ತುತ ಶೇಕಡ ೪೦ರಷ್ಟು ಪೊಲೀಸ್ ಸಿಬ್ಬಂದಿಗೆ ವಸತಿ ಗೃಹ ಒದಗಿಸಲಾಗಿದೆ. ಪೊಲೀಸ್ ವಸತಿ ಯೋಜನೆಯಡಿ ಶೇಕಡ ೮೦ ರಿಂದ ೯೦ರಷ್ಟು ಸಿಬ್ಬಂದಿಗೆ ವಸತಿ ಗೃಹ ಕಲ್ಪಿಸುವ ಉದ್ದೇಶವಿದೆ ಎಂದರು.

ರಾಜ್ಯದಲ್ಲಿ ಅನೇಕ ಪೊಲೀಸ್ ಠಾಣೆಗಳು ಹಳೆಯ ಕಟ್ಟಡಗಳಲ್ಲಿದ್ದು, ಅವುಗಳನ್ನು ಕೂಡ ಹಂತ ಹಂತವಾಗಿ ದುರಸ್ತಿ ಮಾಡಲಾಗುವುದು. ಅಸುರಕ್ಷಿತ ಎನಿಸಿದ ಕಟ್ಟಡಗಳ ಬಗ್ಗೆ ಹೊಸ ಕಟ್ಟಡ ನಿರ್ಮಾಣ ಕೈಗೊಳ್ಳಲಾಗುವುದು ಎಂದು ಗೃಹ ಸಚಿವ ಪರಮೇಶ್ವರ್ ತಿಳಿಸಿದ್ದಾರೆ.

---

ವನ್ಯಜೀವಿಗಳ ಸಂಖ್ಯೆ ದಿನದಿಂದ ದಿನಕ್ಕೆ ಹೆಚ್ಚಳವಾಗುತ್ತಿದ್ದು, ಜನರ ಅಮೂಲ್ಯ ಜೀವ, ಬೆಳೆ ಹಾನಿ ತಪ್ಪಿಸಲು ಆಯ್ದ ಪ್ರದೇಶದಲ್ಲಿ, ಆಯ್ದ ವನ್ಯಜೀವಿಗಳ ಸಂತಾನಶಕ್ತಿ ನಿಯಂತ್ರಣದ ಸಲಹೆಗಳು

ಬಂದಿವೆ. ಈ ಬಗ್ಗೆ ಸಾರ್ವಜನಿಕವಾಗಿ ಹಾಗೂ ತಜ್ಞರ ಮಟ್ಟದಲ್ಲಿ ಚರ್ಚೆ ಆಗುವ ಅಗತ್ಯವಿದೆ ಎಂದು ಅರಣ್ಯ, ಜೀವಿಶಾಸ್ತ್ರ ಮತ್ತು ಪರಿಸರ ಸಚಿವ ಈಶ್ವರ ಬಿ ಖಂಡ್ರೆ ಹೇಳಿದ್ದಾರೆ.

ಕೊಡಗು ಜಿಲ್ಲೆಯ ದುಬಾರೆಯಲ್ಲಿ  ಕಾವೇರಿ ನದಿಗೆ ಅಡ್ಡವಾಗಿ ನೂತನ ತೂಗುಸೇತುವೆ ಮತ್ತು ಅಧಿಕಾರಿಗಳ ವಸತಿಗೃಹ ನಿರ್ಮಾಣಕ್ಕೆ ಶಂಕುಸ್ಥಾಪನೆ ನೆರವೇರಿಸಿದ ಬಳಿಕ ಅವರು ಮಾತನಾಡಿದರು.

ದುಬಾರೆಯಲ್ಲಿ  ಪ್ರವಾಸಿಗರ ಅನುಕೂಲಕ್ಕಾಗಿ ಮತ್ತು ದುಬಾರೆ ಹಾಡಿಯಲ್ಲಿರುವ ೧೫೦ ಮನೆಗಳ ನಿವಾಸಿಗಳಿಗೆ ತುರ್ತು ಸಂದರ್ಭದಲ್ಲಿ ನಗರಕ್ಕೆ ಬರಲು ಅನುಕೂಲವಾಗುವಂತೆ ೭ ಕೋಟಿ ೩೦ ಲಕ್ಷ ರೂಪಾಯಿ ವೆಚ್ಚದಲ್ಲಿ ಗುಣಮಟ್ಟದ ತೂಗು ಸೇತುವೆ ನಿರ್ಮಿಸಲಾಗುತ್ತಿದೆ.

ಈ ಮೂಲಕ ದೀರ್ಘ ಕಾಲದ ಬೇಡಿಕೆಯನ್ನು ಈಡೇರಿಸಲಾಗುತ್ತಿದೆ ಎಂದರು. ಆನೆ-ಮಾನವ ಸಂಘರ್ಷ ನಿಯಂತ್ರಿಸಲು ಕೈಗೊಳ್ಳಬೇಕಾದ ಕ್ರಮಗಳ ಕುರಿತಂತೆ ಶಿಫಾರಸ್ಸು ಮಾಡಲು ರಚಿಸಲಾಗಿದ್ದ ತಜ್ಞರ ಸಮಿತಿ ವರದಿ ನೀಡಿದೆ. ಕಾಡಂಚಿನ ಜನರು ಕೂಡ ಈ ಬಗ್ಗೆ ಸಲಹೆ ನೀಡಬೇಕು ಎಂದರು.

ರೈಲ್ವೆ ಬ್ಯಾರಿಕೇಡ್, ಆನೆ ಕಂದಕ ನಿರ್ಮಾಣಕ್ಕೆ ಹಣಕಾಸಿನ ಕೊರತೆ ಇಲ್ಲ. ಅನುದಾನದ ಕೊರತೆ ಇಲ್ಲ. ಹೆಚ್ಚಿನ ಅನುದಾನ ನೀಡುವಂತೆ ಮುಖ್ಯಮಂತ್ರಿಗಳಿಗೆ ಮನವಿ ಮಾಡಿದ್ದು, ಆದಷ್ಟು ಶೀಘ್ರ ಹೆಚ್ಚಿನ ಬ್ಯಾರಿಕೇಡ್ ಅಳವಡಿಸಲಾಗುವುದು ಎಂದು ಸಚಿವರು ಹೇಳಿದರು.

ಅರಣ್ಯವಾಸಿಗಳು ಮತ್ತು ಅರಣ್ಯದಂಚಿನ ಜನರು ದೀರ್ಘ ಕಾಲದಿಂದ ಅರಣ್ಯವನ್ನು ಸಂರಕ್ಷಿಸಿದ್ದಾರೆ. ಆದರೆ ಇಂದು ಮಾನವ-ವನ್ಯಜೀವಿ ಸಂಘರ್ಷದಿಂದ ಅಮೂಲ್ಯ ಜೀವಹಾನಿ ಆಗುತ್ತಿದ್ದು, ಅಧಿಕಾರಿ ಮತ್ತು ಸಿಬ್ಬಂದಿಗಳು ಜನರ ಜೀವ ಉಳಿಸಲು ಪ್ರಥಮ ಆದ್ಯತೆ ನೀಡಬೇಕು ಎಂದರು.

---

ಸರ್ಕಾರ ಈಗಾಗಲೇ ೧೦ ಸಾವಿರ ಪೌರಕಾರ್ಮಿಕರನ್ನು ಖಾಯಂಗೊಳಿಸಿದ್ದು, ಇನ್ನುಳಿದವರನ್ನೂ ಹಂತ ಹಂತವಾಗಿ ಖಾಯಂಗೊಳಿಸಲಿದೆ ಎಂದು ರಾಜ್ಯ ಸಫಾಯಿ ಕರ್ಮಚಾರಿ ಅಭಿವೃದ್ಧಿ ನಿಗಮದ ಅಧ್ಯಕ್ಷ ಮುರಳಿ ಅಶೋಕ ಸಾಲಪ್ಪ ಹೇಳಿದ್ದಾರೆ.

ಬೆಳಗಾವಿಯಲ್ಲಿ ಇಂದು ನಡೆದ ಪೌರ ಕಾರ್ಮಿಕರ ಆರೋಗ್ಯ ತಪಾಸಣೆ ಶಿಬಿರ ಮತ್ತು ಅರಿವು ಮೂಡಿಸುವ ಕಾರ್ಯಕ್ರಮ ಹಾಗೂ ಆರೋಗ್ಯ ವಿಮಾ ಕಾರ್ಡ್ ವಿತರಣಾ ಕಾರ್ಯಕ್ರಮದಲ್ಲಿ ಮಾತನಾಡಿದರು.

ಪೌರಕಾರ್ಮಿಕರ ಆರೋಗ್ಯ ಕಾಪಾಡುವ ನಿಟ್ಟಿನಲ್ಲಿ ೫ ಲಕ್ಷ ರೂಪಾಯಿವರೆಗೆ ನಗದು ರಹಿತ ಆರೋಗ್ಯ ವಿಮಾ ಸೌಲಭ್ಯವನ್ನು ನೀಡಲಾಗುತ್ತಿದೆ. ನಿವೃತ್ತಿಯವರೆಗೂ ಕಾರ್ಡ್ ಬಳಸಿ ಆರೋಗ್ಯ ಚಿಕಿತ್ಸೆ ಪಡೆಯಬಹುದು ಎಂದು ಹೇಳಿದರು.

---

ಶೃಂಗೇರಿ ವಿಧಾನಸಭಾ ಕ್ಷೇತ್ರದಿಂದ ಆಯ್ಕೆಯಾಗಿರುವ ಬಿಜೆಪಿಯ ಡಿ.ಎನ್.ಜೀವರಾಜ, ವಿಧಾನಸಭಾ ಸದಸ್ಯರಾಗಿ ಇಂದು ಪ್ರಮಾಣ ವಚನ ಸ್ವೀಕರಿಸಿದರು.

ಬೆಂಗಳೂರು ವಿಧಾನಸೌಧದಲ್ಲಿಂದು ವಿಧಾನಸಭಾಧ್ಯಕ್ಷ ಯು.ಟಿ.ಖಾದರ್ ಫರೀದ್ ಪ್ರಮಾಣ ವಚನ ಬೋಧಿಸಿದರು.

ಈ ಸಂದರ್ಭದಲ್ಲಿ ವಿಧಾನಮಂಡಲದಲ್ಲಿನ ಪ್ರತಿಪಕ್ಷಗಳ ನಾಯಕರುಗಳಾದ ಆರ್.ಅಶೋಕ ಹಾಗೂ ಛಲವಾದಿ ನಾರಾಯಣಸ್ವಾಮಿ ಉಪಸ್ಥಿತರಿದ್ದರು.

ಶೃಂಗೇರಿ ವಿಧಾನಸಭಾ ಕ್ಷೇತ್ರಕ್ಕೆ ೨೦೨೩ರ ಮೇ ೨ರಂದು ನಡೆದ ಚುನಾವಣೆಗೆ ಸಂಬಂಧಿಸಿದಂತೆ ನ್ಯಾಯಾಲಯ ನೀಡಿದ ಆದೇಶದ ಮೇರೆಗೆ ಕೈಗೊಂಡ ಅಂಚೆ ಮತಗಳ ಮರು ಎಣಿಕೆಯಲ್ಲಿ ಬಿಜೆಪಿ ಅಭ್ಯರ್ಥಿ ಡಿ.ಎನ್.ಜೀವರಾಜ್ ಅಧಿಕ ಮತ ಪಡೆದು ಆಯ್ಕೆಯಾಗಿದ್ದಾರೆ.

---

ಮುಖ್ಯಮಂತ್ರಿ ಸಿದ್ದರಾಮಯ್ಯ ಗ್ಯಾರಂಟಿ ಯೋಜನೆಗಳ ಪ್ರಯೋಜನಗಳನ್ನು ಚುನಾವಣಾ ಅಮೀಷ ರೀತಿಯಲ್ಲಿ ನೀಡುತ್ತಿದ್ದಾರೆ ಎಂದು ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ ಬೆಂಗಳೂರಿನಲ್ಲಿಂದು ಆಪಾದಿಸಿದ್ದಾರೆ.

ಗೃಹಲಕ್ಷ್ಮಿ ಹಣವನ್ನು ಪ್ರತಿ ತಿಂಗಳು ನೀಡುವ ಬದಲು ತಡೆಹಿಡಿದು ಉಪ ಚುನಾವಣೆ ಸಂದರ್ಭದಲ್ಲಿ ಬಿಡುಗಡೆ ಮಾಡಿದ್ದಾರೆ ಎಂದು ಅವರು ಟೀಕಿಸಿದ್ದಾರೆ.

ಯಡಿಯೂರಪ್ಪ ಅಧಿಕಾರವಾಧಿಯಲ್ಲಿ ಬಡವರಿಗೆ ನೆರವಾಗಲು ಭಾಗ್ಯಲಕ್ಷ್ಮಿ, ಸಂಧ್ಯಾಸುರಕ್ಷಾ, ಬೈಸಿಕಲ್ ಮೊದಲಾದ ಯೋಜನೆಗಳನ್ನು ತರಲಾಗಿತ್ತು ಎಂದು ಅವರು ಹೇಳಿದ್ದಾರೆ.

ಈ ಹಿಂದೆ ಮತಗಳ್ಳತನವಾಗಿದೆ ಎಂದು ಆರೋಪಿಸಿ ಕಾಂಗ್ರೆಸ್ ನಾಯಕ ರಾಹುಲ್ ಗಾಂಧಿ ರಾಜ್ಯ ಪ್ರವಾಸ ಮಾಡಿದ್ದರು ; ರಾಜ್ಯ ಹೈಕೋರ್ಟ್ ಆದೇಶದಂತೆ ಶೃಂಗೇರಿ ಕ್ಷೇತ್ರದಲ್ಲಿ ಮರು ಮತ ಎಣಿಕೆ ನಡೆದು ಬಿಜೆಪಿ ಅಭ್ಯರ್ಥಿ ಗೆದ್ದಿದ್ದಾರೆ. ಈಗ ರಾಹುಲ್ ಗಾಂಧಿ ದೇಶದ ಜನರ ಕ್ಷಮೆ ಕೇಳಬೇಕು ಎಂದು ಬಿ.ವೈ.ವಿಜಯೇಂದ್ರ ಒತ್ತಾಯಿಸಿದ್ದಾರೆ.

---

ತುಮಕೂರಿನಲ್ಲಿ ನಡೆಯುತ್ತಿರುವ ಐಟಿಎಫ್ ಡಬ್ಲ್ಯು ಟೆನಿಸ್ ಓಪನ್ ಟೂರ್ನಿಯ ಮಹಿಳೆಯರ ಸಿಂಗಲ್ಸ್ ವಿಭಾಗದ ೩೨ನೇ ಸುತ್ತಿನಲ್ಲಿ ಭಾರತದ ಆಟಗಾರ್ತಿಯರು ಪ್ರಭಾವ ಬೀರಿದ್ದಾರೆ.

ಭಾರತೀಯರ ನಡುವಿನ ಪಂದ್ಯದಲ್ಲಿ ಲಕ್ಷ್ಮೀಸಿರಿ ದಂಡು ೧-೬, ೭-೫, ೬-೩ ಸೆಟ್ ಗಳಿಂದ ಪ್ರತ್ಯುಷ ರಾಚಪುಡಿ ಅವರನ್ನು ಮಣಿಸಿದರು.  ಕಶಿಶ್ ಭಾಟಿಯಾ ೬-೧, ೬-೧ ಸೆಟ್ ಗಳಿಂದ ವೈಲ್ಡ್ ಕಾರ್ಡ್ ಪ್ರವೇಶಿತೆ ಅಮೋದಿನಿ ನಾಯಕ್ ಅವರನ್ನು ಮಣಿಸಿ ಅದ್ಭುತ ಲಯದಲ್ಲಿದ್ದರೆ, ಜೆನ್ನಿಫರ್ ಲುಯಿಖಾಮ್ ಕೂಡ ಮೂರು ಸೆಟ್ ಗಳ ಕಠಿಣ ಹೋರಾಟದಲ್ಲಿ ೬-೩, ೪-೬, ೬-೩ ಸೆಟ್ ಗಳಿಂದ ಚೆವಿಕಾ ರೆಡ್ಡಿ ಸಮಾ ಅವರನ್ನು ಸೋಲಿಸಿದರು.

ಶ್ರೇಯಾಂಕಿತ ಭಾರತೀಯರ ಪೈಕಿ ಮೂರನೇ ಶ್ರೇಯಾಂಕಿತ ವೈದೇಹಿ ಚೌಧರಿ ೬-೩, ೬-೪ ಸೆಟ್ ಗಳಿಂದ ತುಮಕೂರಿನ ಸ್ಥಳೀಯ ಯುವತಿ ಸೋಹಾ ಸಾದಿಕ್ ಅವರನ್ನು ಮಣಿಸಿದರೆ,

ನಾಲ್ಕನೇ ಶ್ರೇಯಾಂಕಿತೆ ಜೀಲ್ ದೇಸಾಯಿ ೬-೦, ೬-೦ ಸೆಟ್ ಗಳಿಂದ ಜೀತೇಶ್ ಕುಮಾರಿ ಅವರನ್ನು ಮಣಿಸಿದರು.

ಆದರೆ, ಎಂಟನೇ ಶ್ರೇಯಾಂಕಿತ ಆಟಗಾರ್ತಿ ಆಕಾಂಕ್ಷಾ ದಿಲೀಪ್ ನಿಟ್ಟೂರೆ ೬-೧, ೬-೧ ಗೇಮ್ ಗಳಿಂದ ಅರಿನಾ ಅರಿಫುಲ್ಲಿನಾ ವಿರುದ್ಧ ಸೋಲನುಭವಿಸಿದರು. ಅಗ್ರ ಶ್ರೇಯಾಂಕಿತ ಲಿಥುವೇನಿಯಾದ ಜಸ್ಟಿನಾ ಮಿಕುಲ್ಸ್ಕೈಟ್ ಮತ್ತು ಎರಡನೇ ಶ್ರೇಯಾಂಕಿತ ಪೋಲೆಂಡ್ ನ ಜುಝಾನ್ನಾ ಪಾವ್ಲಿಕೊವ್ಸ್ಕಾ ನೇರ ಸೆಟ್ ಗಳಲ್ಲಿ ತಮ್ಮ ಭಾರತೀಯ ಎದುರಾಳಿಗಳನ್ನು ಸೋಲಿಸಿದರು.

ಆರನೇ ಶ್ರೇಯಾಂಕಿತ ಆಟಗಾರ್ತಿ ಎಕಟೆರಿನಾ ಯಾಶಿನಾ ಕೂಡ ೬-೨, ೬-೨ ಸೆಟ್ ಗಳಿಂದ ಬೇಲಾ ತಮ್ಹಾಂಕರ್ ಅವರನ್ನು ಸೋಲಿಸಿದರೆ, ಪೋಲೆಂಡ್ ನ ಜುಝಾನ್ನಾ ಕೊಲೊನಸ್ ಗೆಲುವಿನೊಂದಿಗೆ ಮುನ್ನಡೆ ಸಾಧಿಸಿದರು.

ಮಹಿಳೆಯರ ಡಬಲ್ಸ್ ವಿಭಾಗದ ೧೬ನೇ ಸುತ್ತಿನಲ್ಲಿ, ಸೋಹಾ ಸಾದಿಕ್ ಮತ್ತು ಮಧುರಿಮಾ ಸಾವಂತ್ ಜೋಡಿ ೬-೩, ೬-೨ ಸೆಟ್ ಗಳಿಂದ ಪೂಜಾ ಇಂಗಳೆ ಮತ್ತು ಪ್ರತ್ಯುಷಾ ರಾಚಪುಡಿ ವಿರುದ್ಧ ಜಯ ಸಾಧಿಸಿದರು. ಶ್ರೀಮಾನ್ಯ ರೆಡ್ಡಿ ಅನುಗೊಂಡ ಮತ್ತು ಸಾಹಿರಾ ಸಿಂಗ್ ಸಹ ೩-೬, ೬-೩, ೧೦-೬ ಸೆಟ್ ಗಳಿಂದ ಲಕ್ಷ್ಮೀಸಿರಿ ದಂಡು ಮತ್ತು ಚೆವಿಕಾ ರೆಡ್ಡಿ ಸಮಾ ವಿರುದ್ಧ ಗೆಲುವು ಸಾಧಿಸಿದರು.

ಮೂರನೇ ಶ್ರೇಯಾಂಕದ ಆಕಾಂಕ್ಷಾ ದಿಲೀಪ್ ನಿಟ್ಟೂರೆ ಮತ್ತು ಜಪಾನ್ ನ ಮಿಚಿಕಾ ಒಜೆಕಿ ೬-೩, ೪-೬, ೧೦-೬ ಸೆಟ್ ಗಳಿಂದ ಕಶಿಶ್ ಭಾಟಿಯಾ ಮತ್ತು ಸೋನಾಲ್ ಪಾಟೀಲ್ ಅವರನ್ನು ಮಣಿಸಿ ಮುನ್ನಡೆ ಸಾಧಿಸಿದರು.

ಟೂರ್ನಿಯಲ್ಲಿ ೯ ದೇಶಗಳ ಟೆನಿಸ್ ಕ್ರೀಡಾಪಟುಗಳು ಭಾಗವಹಿಸಿದ್ದು, ಕ್ರೀಡಾಕೂಟದಲ್ಲಿ ಚಾಂಪಿಯನ್ ಆದವರಿಗೆ ೨೮ ಲಕ್ಷ ಬಹುಮಾನ ನೀಡಲಾಗುವುದು.ಮೇ.೧೦ರಂದು ಅಂತಿಮ ಪಂದ್ಯ ನಡೆಯಲಿದೆ.

---

ದಕ್ಷಿಣ ಕನ್ನಡ, ಉಡುಪಿ ಸೇರಿದಂತೆ ಕರಾವಳಿ ಭಾಗದ ಜಿಲ್ಲೆಗಳಿಗೆ ಉತ್ತಮ ಗುಣಮಟ್ಟದ ವಿದ್ಯುತ್ ಸೌಲಭ್ಯ ಒದಗಿಸುವ 'ಕಡಂದಲೆ ೪೦೦ ಕೆವಿ ವಿದ್ಯುತ್ ಉಪಕೇಂದ್ರ' ಕಾಮಗಾರಿಯನ್ನು ಜುಲೈ ೧೫ರ ಒಳಗಾಗಿ ಪೂರ್ಣಗೊಳಿಸಲಾಗುವುದು ಎಂದು ಕೆಪಿಟಿಸಿಎಲ್ ವ್ಯವಸ್ಥಾಪಕ ನಿರ್ದೇಶಕ ಡಾ. ರಾಮ್ ಪ್ರಸಾತ್ ಮನೋಹರ್ ತಿಳಿಸಿದ್ದಾರೆ.

ಮಂಗಳೂರಿನಲ್ಲಿಂದು ಜಿಲ್ಲಾಧಿಕಾರಿ ಕಚೇರಿಯಲ್ಲಿ ನಡೆದ ಪ್ರಗತಿ ಪರಿಶೀಲನಾ ಸಭೆಯಲ್ಲಿ ಮಾತನಾಡಿದ ಅವರು, ಭೂ ವ್ಯಾಜ್ಯದ ಕಾರಣದಿಂದಾಗಿ ಕಳೆದ ಮೂರು ವರ್ಷಗಳಿಂದ ದಕ್ಷಿಣ ಕನ್ನಡ ಜಿಲ್ಲೆಯ ಮೂಡುಬಿದಿರೆ ತಾಲೂಕಿನ ಕಡಂದಲೆ ಗ್ರಾಮದಲ್ಲಿ ೪೦೦ ಕೆವಿ ಲೈನ್ ಕಾಮಗಾರಿ ಸ್ಥಗಿತಗೊಂಡಿತ್ತು. ಇಂಧನ ಸಚಿವ ಕೆ.ಜೆ. ಜಾರ್ಜ್ ಅವರ ಸತತ ಪ್ರಯತ್ನದಿಂದಾಗಿ ಈ ಎಲ್ಲಾ ಅಡೆತಡೆಗಳನ್ನು ಯಶಸ್ವಿಯಾಗಿ ನಿವಾರಿಸಲಾಗಿದೆ ಎಂದರು.

__________ ಮುಕ್ತಾಯ ___________